# Akashvani : Bangalore
# Regional Bulletin In Kannada
# 27.03.2026 / 18.40  hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**27.03.2026 / 18.40   hrs**

**<><*<><>*><>**

<u>ಮುಖ್ಯಾಂಶಗಳು</u>

೧. ಎಸ್‌ಎಸ್‌ಎಲ್‌ಸಿ ಒಟ್ಟು ಅಂಕ ೬೨೫ ರಿಂದ ೫೨೫ಕ್ಕೆ ಇಳಿಕೆ ; ತೃತೀಯ ಭಾಷೆಗೆ ಗ್ರೇಡ್ ನೀಡಲು ಶಿಕ್ಷಣ ಇಲಾಖೆ ನಿರ್ಧಾರ

೨. ದಾವಣಗೆರೆ ದಕ್ಷಿಣ ವಿಧಾನಸಭಾ ಉಪಚುನಾವಣೆ - ಕಣದಿಂದ ಹಿಂದಕ್ಕೆ ಸರಿದ ಕಾಂಗ್ರೆಸ್ ಬಂಡಾಯ ಅಭ್ಯರ್ಥಿ ; ಮುಖ್ಯಮಂತ್ರಿ ಸ್ಪಷ್ಟನೆ

೩. ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯಾವಳಿ ಹಿನ್ನಲೆ ; ಸುರಕ್ಷತೆ ಕುರಿತಂತೆ ಅಧಿಕಾರಿಗಳು, ಕೆಎಸ್‌ಸಿಎ ಜೊತೆ ಸರ್ಕಾರದ ಮುಖ್ಯಕಾರ್ಯದರ್ಶಿ ಸಭೆ

೪. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ಐಪಿಎಲ್ ಉದ್ಘಾಟನಾ ಪಂದ್ಯ - ಸಾರ್ವಜನಿಕ ಸಾರಿಗೆ ಬಳಸುವಂತೆ ಪೊಲೀಸ್ ಇಲಾಖೆ ಮನವಿ

೫. ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟ ; ೧೩ ಚಿನ್ನದ ಪದಕದೊಂದಿಗೆ ಕರ್ನಾಟಕ ಅಗ್ರಸ್ಥಾನ

**<><*<><>*><>**

ಶಿಕ್ಷಣ ಇಲಾಖೆ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಮಂಡಳಿಯಲ್ಲಿ ಮಹತ್ವದ ಬದಲಾವಣೆ ಮಾಡಿದೆ. ಇನ್ನು ಮುಂದೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಒಟ್ಟು ೫೨೫ ಅಂಕಗಳನ್ನು ಮಾತ್ರ ನಿಗದಿಪಡಿಸಲಾಗಿದೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿದ ಶಿಕ್ಷಣ ಸಚಿವ ಮಧುಬಂಗಾರಪ್ಪ, ತೃತಿಯ ಭಾಷೆ ಪರೀಕ್ಷೆಯ ಅಂಕಗಳನ್ನು ಅಂಕಪಟ್ಟಿಯಿಂದ ಹೊರಗಿಡಲಾಗಿದ್ದು, ಗ್ರೇಡ್ ಮೂಲಕ ಅಂಕ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಮಧುಬಂಗಾರಪ್ಪ

ಈ ಹೊಸ ನಿಯಮವು ಹೊಸ ಶೈಕ್ಷಣಿಕ ವರ್ಷದಿಂದಲೇ ಜಾರಿಗೆ ಬರಲಿದೆ. ಹಿಂದಿ ಪರೀಕ್ಷೆಯ ಅಂಕವನ್ನು ಎ-ಬಿ-ಸಿ-ಡಿ ಎಂಬ ಗ್ರೇಡ್‌ನಲ್ಲಿ ನೀಡಲಾಗುವುದು. ಇದರಿಂದ ಒಟ್ಟು ಅಂಕಗಳು ೬೨೫ರಿಂದ ೫೨೫ಕ್ಕೆ ಇಳಿಕೆಯಾಗಲಿದೆ. ವಿದ್ಯಾರ್ಥಿಗಳು ತೃತೀಯ ಭಾಷೆಯ ಪರೀಕ್ಷೆ ಬರೆಯುವುದು ಕಡ್ಡಾಯವಾಗಿದೆ.

**<><*<><>*><>**

ದಾವಣಗೆರೆ ದಕ್ಷಿಣ ವಿಧಾನಸಭೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಸಾಧಿಕ್ ಪೈಲ್ವಾನ್ ಮನವೊಲಿಸುವಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಯಶಸ್ವಿಯಾಗಿದ್ದಾರೆ. ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ತಮ್ಮ

ಬೆಂಬಲಿಗರೊಂದಿಗೆ ಭೇಟಿಯಾಗಿ ಸಾಧಿಕ್ ಪೈಲ್ವಾನ್ ಮಾತುಕತೆ ನಡೆಸಿದ್ದಾರೆ. ಶಾಸಕರಾದ ರಿಜ್ವಾನ್ ಅರ್ಷದ್, ಸಲೀಂ ಅಹಮದ್, ದಾವಣಗೆರೆಯಲ್ಲಿ ಸಾಧಿಕ್ ಪೈಲ್ವಾನ್ ಅವರ ನಿವಾಸಕ್ಕೆ ತೆರಳಿ ನಾಮಪತ್ರ ಹಿಂಪಡೆಯುವಂತೆ ಮನವಿ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬೆಂಗಳೂರಿಗೆ ಕರೆಸಿ ಮನವೊಲಿಸುವಲ್ಲಿ ಯಶಸ್ವಿಯಾಗಿದ್ದಾರೆ. ಪೈಲ್ವಾನ್ ಹೆಸರು ಮಾತ್ರ ಕಣದಲ್ಲಿ ಇರಲಿದ್ದು, ಅವರು ತಮ್ಮ ಪರ ಚುನಾವಣೆ ಪ್ರಚಾರ ನಡೆಸದೆ ದೂರ ಉಳಿಯಲಿದ್ದಾರೆ.

<><*<><>*><>

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನ ಕಾಂಗ್ರೆಸ್ ಭವನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸ್ವತಂತ್ರಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ಸಾಧಿಕ್ ಪೈಲ್ವಾನ್ ಉಮೇದುವಾರಿಕೆ ಹಿಂಪಡೆದಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ದಾವಣಗೆರೆಯಲ್ಲಿ ೭೦ ಸಾವಿರ ಮುಸ್ಲಿಂ ಮತದಾರರಿದ್ದು, ಪೈಲ್ವಾನ್ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆದರೂ ಹೈ-ಕಮಾಂಡ್ ಮೃತರಾದ ಶಾಸಕರ ಕುಟುಂಬದವರಿಗೆ ಟಿಕೆಟ್ ನೀಡುವ ಪದ್ಧತಿಯಂತೆ ಸಮರ್ಥ್ ಮಲ್ಲಿಕಾರ್ಜುನ್‌ಗೆ ಟಿಕೆಟ್ ನೀಡಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ನಾಳೆಯಿಂದ ಐಪಿಎಲ್ ಪಂದ್ಯಾವಳಿ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಕೆಎಸ್‌ಸಿಎ ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸುರಕ್ಷತೆಯ ಕುರಿತಂತೆ ಇಂದು ಮಹತ್ವದ ಸಭೆ ನಡೆಸಿದರು. ಈ ವೇಳೆ ಪಂದ್ಯಾವಳಿ ಆಯೋಜನೆಗೆ ಇರುವ ಷರತ್ತುಗಳು ಮತ್ತು ಎಚ್ಚರಿಕೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಭೆಯಲ್ಲಿ ಸೂಚನೆ ನೀಡಿದ್ದಾರೆ. ಅಧಿಕಾರಿಗಳು ಮತ್ತು ಸಂಸ್ಥೆಗಳು ಪಂದ್ಯದ ವೇಳೆ ಹೈ-ಅಲರ್ಟ್ ಆಗಿರಬೇಕು. ಕ್ಷಣ ಕ್ಷಣದ ಮಾಹಿತಿಗಳನ್ನು ಅಧಿಕಾರಿಗಳಿಗೆ ವಿನಿಮಯ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ಮೆಟ್ರೋ ರೈಲಿನ ಪ್ರಯಾಣಿಕರ ಸಾಂದ್ರತೆ, ಮೆಟ್ರೋ ಸಂಚರಿಸುವ ವೇಳಾಪಟ್ಟಿ, ಹೆಚ್ಚುವರಿ ಭದ್ರತೆ ಕುರಿತಂತೆಯೂ ಎಚ್ಚರಿಕೆ ವಹಿಸುವಂತೆ ನಿರ್ದೇಶನ ನೀಡಿದ್ದಾರೆ.

<><*<><>*><>

ಸಂಸದರು ಹಾಗೂ ಶಾಸಕರಿಗೆ ಐಪಿಎಲ್ ಸೇರಿದಂತೆ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯಾವಳಿಗಳ ಟಿಕೆಟ್ ವಿತರಣೆ ಸಂಬಂಧ ಇಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಹಾಗೂ ಇತರೆ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಇದಕ್ಕೂ ಮೊದಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ವೆಂಕಟೇಶ್ ಪ್ರಸಾದ್ ಐಪಿಎಲ್ ಆಹ್ವಾನ ನೀಡುವ ಸಂದರ್ಭದಲ್ಲಿ ಶಾಸಕರಿಗೆ ಟಿಕೆಟ್ ನೀಡುವಂತೆ ಸಲಹೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಕೆಎಸ್‌ಸಿಎ ಶಾಸಕರಿಗೆ ಟಿಕೆಟ್ ನೀಡುವ ಭರವಸೆ ನೀಡಿದೆ.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್-೨೦೨೬ರ ಉದ್ಘಾಟನಾ ಪಂದ್ಯ ನಾಳೆ ನಡೆಯಲಿದೆ. ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಮುನ್ನೆಚ್ಚರಿಕಾ ಕ್ರಮವಾಗಿ

ಬೆಂಗಳೂರಿನಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಸಾರ್ವಜನಿಕರು ಮೆಟ್ರೋ ಮತ್ತು ಬಿಎಂಟಿಸಿ ಸಾರಿಗೆ ವ್ಯವಸ್ಥೆಯನ್ನು ಬಳಸುವಂತೆ ಪೊಲೀಸರು ಮನವಿ ಮಾಡಿದ್ದಾರೆ. ಪ್ರವೇಶ ಹಾಗೂ ನಿರ್ಗಮನ ದ್ವಾರಗಳ ಸಂಖ್ಯೆಯನ್ನು ದ್ವಿಗುಣಗೊಳಿಸಲಾಗಿದ್ದು, ಈ ಬಾರಿ ೨೨ರಿಂದ ೪೫ ದ್ವಾರಗಳನ್ನು ತೆರೆಯಲಾಗಿದೆ. ಪ್ರೇಕ್ಷಕರು ಟಿಕೆಟ್‌ನಲ್ಲಿ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತ ನೋ ಪಾರ್ಕಿಂಗ್ ಇರಲಿದ್ದು, ಬೇರೆಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.

<><*<><>*><>

ವಿಶ್ವ ವಿಖ್ಯಾತ ಮೇಲುಕೋಟೆ ವೈರಮುಡಿ ಬ್ರಹ್ಮೋತ್ಸವ ಮಾರ್ಚ್ ೨೩ ರಿಂದ ಆರಂಭವಾಗಿದ್ದು, ಏಪ್ರಿಲ್ ೪ ವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದೆ. ಕಾನೂನು ಸುವ್ಯವಸ್ಥೆ ಹಾಗೂ ಭದ್ರತೆಗಾಗಿ ೧ ಸಾವಿರದ ೨೧೦ ಆರಕ್ಷಕ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ನಾಳೆ ವೈರಮುಡಿ ಕಿರೀಟಧಾರಣೆ ಉತ್ಸವ ನಡೆಯಲಿದ್ದು ಭಕ್ತರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ಏಪ್ರಿಲ್ ೧ರಂದು ತುಮಕೂರಿನ ಸಿದ್ದಗಂಗಾ ಮಠದ ಲಿಂಗೈಕ್ಯ ಶ್ರೀ ಶಿವಕುಮಾರ ಸ್ವಾಮೀಜಿ ಅವರ ಜಯಂತಿ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಭಾಗವಹಿಸಲಿದ್ದಾರೆ. ಈ ಕುರಿತಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಜಿಲ್ಲಾಧಿಕಾರಿ ಶುಭಾಕಲ್ಯಾಣ್, ವಾಹನ ಸಂಚಾರ ಮಾರ್ಪಡಿಸಲು ಕ್ರಮವಹಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚಿಸಿದ್ದಾರೆ. ಭದ್ರತೆ ಕುರಿತು ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಭದ್ರತೆಗೆ ಸುಮಾರು ೧೫ ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲು ಪೊಲೀಸ್ ಇಲಾಖೆ ಸಿದ್ಧತೆ ಮಾಡಿಕೊಂಡಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಮಾದಕ ವಸ್ತುಗಳ ಸರಬರಾಜು ಮತ್ತು ಬಳಕೆಯ ಕುರಿತಂತೆ ಅನುಮಾನಾಸ್ಪದ ಸ್ಥಳಗಳಲ್ಲಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳು ತಮ್ಮ ವ್ಯಾಪ್ತಿಯಲ್ಲಿ ವ್ಯಾಪಕ ತಪಾಸಣೆ ನಡೆಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಸೂಚನೆ ನೀಡಿದ್ದಾರೆ. ಎನ್‌ಕಾರ್ಡ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಾದಕ ವಸ್ತುಗಳ ಸರಬರಾಜು ತಡೆಯಲು ಪ್ರತೀ ತಿಂಗಳು ನಡೆಸಿದ ತಪಾಸಣೆಗಳು ಮತ್ತು ವಶಪಡಿಸಿಕೊಂಡ ಮಾದಕ ವಸ್ತುಗಳ ಪ್ರಮಾಣದ ಕುರಿತಂತೆ ಸಂಪೂರ್ಣ ವರದಿಯನ್ನು ಕಡ್ಡಾಯವಾಗಿ ಸಲ್ಲಿಸುವಂತೆ ನಿರ್ದೇಶನ ನೀಡಿದ್ದಾರೆ. ಮಾದಕ ವಸ್ತುಗಳ ಬಳಕೆಯ ದುಷ್ಪರಿಣಾಮಗಳ ಬಗ್ಗೆ ಶಾಲಾ ಕಾಲೇಜುಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.  ಅಂಚೆ ಇಲಾಖೆಯಲ್ಲಿ ಸ್ವೀಕೃತವಾಗುವ ಹಾಗೂ ಕೋರಿಯರ್ ಸಂಸ್ಥೆಗಳ ಮೂಲಕ ಆಗಮಿಸುವ ಅನುಮಾನಾಸ್ಪದ ಪಾರ್ಸೆಲ್‌ಗಳನ್ನು ತಪಾಸಣೆ ನಡೆಸುವಂತೆ ತಿಳಿಸಿದ್ದಾರೆ.

<><*<><>*><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಸ್ತುತ ೧೯ ಗ್ರಾಮ ಪಂಚಾಯಿತಿಗಳ ೨೩ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಮುಂದಿನ ದಿನಗಳಲ್ಲಿ ಇನ್ನೂ ೬೬ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆಗಳಿದೆ. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಕೂಡಲೇ ಜಾಗೃತರಾಗಿ ಮುನ್ನೆಚ್ಚರಿಕಾ ಕ್ರಮ ತೆಗೆದುಕೊಳ್ಳುವಂತೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ಸೂಚಿಸಿದ್ದಾರೆ.

ಜಿಲ್ಲಾಡಳಿತ ಭವನದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಗರ ಪ್ರದೇಶದಲ್ಲಿರುವ ೧೪ ಸಮಸ್ಯಾತ್ಮಕ ವಾರ್ಡ್‌ಗಳಿಗೆ ೯ ಖಾಸಗಿ ಟ್ಯಾಂಕರ್ ಮತ್ತು ೧೦ ಖಾಸಗಿ ಕೊಳವೆಬಾವಿಗಳ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿಯೂ ಖಾಸಗಿ ಕೊಳವೆ ಬಾವಿಗಳ ಮಾಲೀಕರ ಸಹಕಾರದೊಂದಿಗೆ ಕುಡಿಯುವ ನೀರು ಪೂರೈಸಿ ಜನ ಜಾನುವಾರುಗಳಿಗೆ ನೀರಿನ ತೊಂದರೆಯಾಗದಂತೆ ಎಚ್ಚರವಹಿಸಬೇಕು ಎಂದು ಸೂಚನೆ ತಿಳಿಸಿದ್ದಾರೆ.

**<><*<><>*><>**

ದಾವಣಗೆರೆ ವಿಶ್ವ ವಿದ್ಯಾಲಯದ ಶಿವಗಂಗೋತ್ರಿ ಆವರಣದಲ್ಲಿ ಭಾರತೀಯ ವಿಶ್ವವಿದ್ಯಾಲಯಗಳ ಒಕ್ಕೂಟದ ಸಹಯೋಗದಲ್ಲಿ ೨೦೨೫-೨೬ನೇ ಸಾಲಿನ ದಕ್ಷಿಣ ವಲಯ ಅಂತರ್ ವಿಶ್ವವಿದ್ಯಾಲಯಗಳ ಖೋ-ಖೋ ಪಂದ್ಯಾವಳಿಗೆ ಪೂರ್ವ ವಲಯ ಪೊಲೀಸ್ ಮಹಾ ನಿರೀಕ್ಷಕ ಡಾ.ರವಿಕಾಂತೇಗೌಡ ಚಾಲನೆ ನೀಡಿದರು. ಕ್ರೀಡಾ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ರೀತಿಯ ಕ್ರೀಡಾಕೂಟಗಳನ್ನು ಆಯೋಜಿಸುವುದು ಶ್ಲಾಘನೀಯ ಎಂದು ರವಿಕಾಂತೇಗೌಡ ತಿಳಿಸಿದ್ದಾರೆ. ಕರ್ನಾಟಕ ಖೋ ಖೋ ಫೆಡರೇಷನ್ ಅಧ್ಯಕ್ಷ ಲೋಕೇಶ್ ಸೇರಿದಂತೆ ಅನೇಕ ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**<><*<><>*><>**

ದಾವಣಗೆರೆ ವಿಶ್ವ ವಿದ್ಯಾಲಯದ ಶಿವಗಂಗೋತ್ರಿ ಆವರಣದಲ್ಲಿ ಭಾರತೀಯ ವಿಶ್ವವಿದ್ಯಾಲಯಗಳ ಒಕ್ಕೂಟದ ಸಹಯೋಗದಲ್ಲಿ ೨೦೨೫-೨೬ನೇ ಸಾಲಿನ ದಕ್ಷಿಣ ವಲಯ ಅಂತರ್ ವಿಶ್ವವಿದ್ಯಾಲಯಗಳ ಖೋ-ಖೋ ಪಂದ್ಯಾವಳಿಗೆ ಪೂರ್ವ ವಲಯ ಪೊಲೀಸ್ ಮಹಾ ನಿರೀಕ್ಷಕ ಡಾ.ರವಿಕಾಂತೇಗೌಡ ಚಾಲನೆ ನೀಡಿದರು. ಕ್ರೀಡಾ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ರೀತಿಯ ಕ್ರೀಡಾಕೂಟಗಳನ್ನು ಆಯೋಜಿಸುವುದು ಶ್ಲಾಘನೀಯ ಎಂದು ರವಿಕಾಂತೇಗೌಡ ತಿಳಿಸಿದ್ದಾರೆ. ಕರ್ನಾಟಕ ಖೋ ಖೋ ಫೆಡರೇಷನ್ ಅಧ್ಯಕ್ಷ ಲೋಕೇಶ್ ಸೇರಿದಂತೆ ಅನೇಕ ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**